**All India Radio: Bangalore**
**Regional Bulletin In Kannada**
**22.09.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ವಿಧಾನಪರಿಷತ್‌ನ ೪ ಸ್ಥಾನಗಳಿಗೆ ಚುನಾವಣೆ - ಅಕ್ಟೋಬರ್ ೨೩ಕ್ಕೆ ಮತದಾನ
2. ರಾಜ್ಯದ ತಂತ್ರಜ್ಞಾನ ನಾಯಕತ್ವಕ್ಕೆ ಕಿಯೋನಿಕ್ಸ್ ಕೊಡುಗೆ ಅಪಾರ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣ್ಣನೆ
3. ವಿಧಾನ ಮಂಡಲದ ಉಭಯ ಸದನಗಳಲ್ಲಿಂದು ಕಸ್ತೂರಿ ರಂಗನ್ ವರದಿ, ಬರಗಾಲ ಕುರಿತಂತೆ ಮುಂದುವರಿದ ಚರ್ಚೆ
4. ಕೆಪಿಎಸ್‌ಸಿ ಪಶುವೈದ್ಯರ ನೇಮಕಾತಿ ಹಗರಣ ; ಸರ್ಕಾರಕ್ಕೆ ತನಿಖಾ ವರದಿ ಸಲ್ಲಿಸಿದ ಸಿಐಡಿ
5. ಹಿರಿಯ ನಟ ಅನಂತನಾಗ್ ಅವರಿಗೆ ರಾಷ್ಟ್ರಪತಿಯವರಿಂದ ಇಂದು ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ

<><><><>

ವಿಧಾನ ಪರಿಷತ್‌ನ ನಾಲ್ಕು ಸ್ಥಾನಗಳ ಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ದಿನಾಂಕ ಘೋಷಿಸಿದೆ. ವಿಧಾನಪರಿಷತ್‌ನ ಎರಡು ಶಿಕ್ಷಕರ ಹಾಗೂ ಎರಡು ಪದವೀಧರ ಕ್ಷೇತ್ರಗಳಿಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆಗೆ ಇದೇ ೨೯ರಂದು ನಾಮಪತ್ರ ಸಲ್ಲಿಕೆ ಆರಂಭವಾಗಲಿದ್ದು, ಅಕ್ಟೋಬರ್ ೨೩ಕ್ಕೆ ಚುನಾವಣೆ ನಡೆಯಲಿದೆ. ಅಕ್ಟೋಬರ್ ೨೭ರಂದು ಮತ ಎಣಿಕೆ ನಡೆಯಲಿದೆ. ನಾಮಪತ್ರ ಸಲ್ಲಿಕೆಗೆ ಕೊನೆ ದಿನಾಂಕ ಅಕ್ಟೋಬರ್ ೬ ಆಗಿದ್ದು, ೭ ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಈ ಕ್ಷೇತ್ರಗಳಲ್ಲಿ ಮಾದರಿ ನೀತಿ ಸಂಹಿತೆ ತಕ್ಷಣದಿಂದಲೇ ಜಾರಿಗೆ ಬಂದಿದೆ. ವಿಧಾನ ಪರಿಷತ್‌ನ ಶಿಕ್ಷಕರು ಹಾಗೂ ಪದವೀಧರ ಕ್ಷೇತ್ರಗಳಿಗೆ ಬಿಜೆಪಿ ಈಗಾಗಲೇ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ್ದು, ಒಂದು ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಟ್ಟಿದೆ. ಆಗ್ನೇಯ ಪದವೀಧರ ಕ್ಷೇತ್ರದ ಚಿದಾನಂದ ಎಂ.ಗೌಡ, ಪಶ್ಚಿಮ ಪದವೀಧರ ಕ್ಷೇತ್ರದ ಎಸ್.ವಿ.ಸಂಕನೂರು, ಈಶಾನ್ಯ ಶಿಕ್ಷಕರ ಕ್ಷೇತ್ರದ ಶಶಿಲ್ ಜಿ. ನಮೋಶಿ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರದ ಪುಟ್ಟಣ್ಣ ಅವರ ಅವಧಿ ನವೆಂಬರ್ ೧೧ಕ್ಕೆ ಕೊನೆಗೊಳ್ಳಲಿದೆ.

<><><><>

ಬೆಂಗಳೂರಿನ ಎಲೆಕ್ಟ್ರಾನಿಕ್ಸ್ ಸಿಟಿಯ ಆರಂಭಿಕ ಅಡಿಪಾಯದಿಂದ ಹಿಡಿದು ತಂತ್ರಜ್ಞಾನದ ಅಗಾಧ ಪರಿವರ್ತನೆ ಹಾಗೂ ಸಾಧನೆಗೆ ಕಿಯೋನಿಕ್ಸ್ ಗಮನಾರ್ಹ ಕೊಡುಗೆ ನೀಡಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ಕಿಯೋನಿಕ್ಸ್‌ನ ೫೦ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದ ತಂತ್ರಜ್ಞಾನ ನಾಯಕತ್ವಕ್ಕೆ ಕಿಯೋನಿಕ್ಸ್ ಕೊಡುಗೆ ಅಪಾರ ಎಂದು ಬಣ್ಣಿಸಿದ್ದಾರೆ. ಐದು ದಶಕಗಳ ಯಶಸ್ವಿ ಪಯಣವು ಕರ್ನಾಟಕ ಜಾಗತಿಕ ತಂತ್ರಜ್ಞಾನ ತಾಣವಾಗಿ ರೂಪುಗೊಂಡಿರುವ ದೊಡ್ಡ ಪರಿವರ್ತನೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ರಾಜ್ಯದ ತಂತ್ರಜ್ಞಾನ ಮಹತ್ವಾಕಾಂಕ್ಷೆಗಳ ಜೊತೆಗೆ ಕಿಯೋನಿಕ್ಸ್ ಪಾತ್ರವು ವಿಸ್ತರಿಸಿದೆ. ಇದು ರಾಜ್ಯದ ತಂತ್ರಜ್ಞಾನ ಪರಿಸರ ವ್ಯವಸ್ಥೆಯಲ್ಲಿ ಪ್ರಮುಖ ಅನುಷ್ಠಾನ ಸಂಸ್ಥೆಯಾಗಿಯೂ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ. ಕಿಯೋನಿಕ್ಸ್ ಮಂಗಳೂರು, ಮೈಸೂರು, ಶಿವಮೊಗ್ಗ, ಹುಬ್ಬಳ್ಳಿ, ಕಲಬುರಗಿ ಸೇರಿದಂತೆ ಬೆಂಗಳೂರಿನ ಆಚೆಗೆ ತನ್ನ ಕಾರ್ಯವ್ಯಾಪ್ತಿಯನ್ನು ವಿಸ್ತರಿಸುವಲ್ಲಿ ಪ್ರಮುಖ ಹೆಜ್ಜೆ ಇಟ್ಟಿದೆ.

<><><><>

ವಿಧಾನಸಭೆ ಕಲಾಪದಲ್ಲಿಂದು ೨ನೇ ದಿನವೂ ಕಸ್ತೂರಿ ರಂಗನ್ ವರದಿ ಕುರಿತಂತೆ ವಿಶೇಷ ಚರ್ಚೆ ಮುಂದುವರೆಯಿತು. ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಬಿಜೆಪಿ ಸದಸ್ಯ ವಿ.ಸುನೀಲ್ ಕುಮಾರ್, ಉಡುಪಿ ಜಿಲ್ಲೆಯ ೬೭ ಗ್ರಾಮಗಳನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಲಾಗಿದೆ. ಈ ಭಾಗದಲ್ಲಿಯ ಜನರು ಜೀವನ ನಡೆಸುವುದು ದುಸ್ತರವಾಗಿದೆ ಎಂದು ಬೆಳಕು ಚೆಲ್ಲಿದರು. ಕುಡಿಯುವ ನೀರಿನ ಪೈಪ್‌ಲೈನ್ ಹಾಕಲು ಅರಣ್ಯ ಇಲಾಖೆ ಪರವಾನಿಗೆ ನೀಡುತ್ತಿಲ್ಲ ಎಂದು ಸದನದ ಗಮನ ಸೆಳೆದರು. ಜನರ ಬದುಕಿನ ಜೊತೆಗೆ ಪಶ್ಚಿಮಘಟ್ಟವೂ ಉಳಿಯಬೇಕು ಎಂದು ಅಭಿಪ್ರಾಯಪಟ್ಟರು. ಶಾಸಕ ಟಿ.ಡಿ.ರಾಜೇಗೌಡ ಮಾತನಾಡಿ, ಸದನ ಒಮ್ಮತದಿಂದ ಈ ವರದಿಯನ್ನು ತಿರಸ್ಕರಿಸಬೇಕು ಎಂದು ಒತ್ತಾಯಿಸಿದರು. ಯಲ್ಲಾಪುರ ಶಾಸಕ ಶಿವರಾಂ ಹೆಬ್ಬಾರ್, ವಿಷಯ ಪ್ರಸ್ತಾಪಿಸಿ, ಉತ್ತರಕನ್ನಡ ಜಿಲ್ಲೆ ರಾಜ್ಯದ ಅತೀ ಹೆಚ್ಚಿನ ಪ್ರಮಾಣದ ಪಶ್ಚಿಮಘಟ್ಟ ಪ್ರದೇಶ ಹೊಂದಿರುವ ಜಿಲ್ಲೆಯಾಗಿದೆ. ಇಲ್ಲಿನ ಜನರು ಈಗಾಗಲೇ ಕಾಳಿ, ಬೇಡ್ತಿ, ಗಂಗಾವಳಿ, ಶರಾವತಿ ಸಹಿತ ೫ ಜಲವಿದ್ಯುತ್ ಯೋಜನೆಗೆ, ಕೈಗಾ ಅಣುವಿದ್ಯುತ್ ಸ್ಥಾವರಕ್ಕೆ ಹಾಗೂ ಸೀಬರ್ಡ್ ನೌಕಾ ನೆಲೆಗೆ ಅಪಾರ ತ್ಯಾಗ ಮಾಡಿದ್ದಾರೆ ಎಂದು ತಿಳಿಸಿದರು. ಶಾಸಕಿ ಭಾಗೀರಥಿ ಮುರುಳ್ಯ ಮಾತನಾಡಿ, ತಮ್ಮ ಕ್ಷೇತ್ರದ ವ್ಯಾಪ್ತಿಯಲ್ಲಿ ೨೬ ಗ್ರಾಮಗಳು ಸೇರಿದ್ದು, ಈ ಭಾಗದ ಜನರ ಹಿತರಕ್ಷಣೆ ಮಾಡಬೇಕು ಎಂದು ಒತ್ತಾಯಿಸಿದರು.

<><><>

ಕಸ್ತೂರಿ ರಂಗನ್ ವರದಿ ಹಾಗೂ ರಾಜ್ಯದಲ್ಲಿ ಉಂಟಾಗಿರುವ ಗಂಭೀರ ಬರ ಪರಿಸ್ಥಿತಿಯ ಕುರಿತು ವಿಧಾನಮಂಡಲದಲ್ಲಿ ಪಕ್ಷಾತೀತವಾಗಿ ಸಮಗ್ರ ಚರ್ಚೆ ನಡೆಸಿ, ರಾಜ್ಯದ ಹಿತಾಸಕ್ತಿಗೆ ಪೂರಕವಾದ ಒಮ್ಮತದ ನಿರ್ಣಯ ಕೈಗೊಳ್ಳಬೇಕಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಪರಿಷತ್‌ನಲ್ಲಿಂದು ಮಾತನಾಡಿದ ಅವರು, ರಾಜ್ಯದಲ್ಲಿ ಈ ಬಾರಿ ಬರ ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ. ರಾಜ್ಯದ ಬಹುತೇಕ ಭಾಗಗಳಲ್ಲಿ ಮಳೆಯ ತೀವ್ರ ಕೊರತೆ ಕಂಡುಬಂದಿದ್ದು, ಕೃಷಿ ಚಟುವಟಿಕೆ ಮತ್ತು ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು. ಪೆಸಿಫಿಕ್ ಸಾಗರದ ಮೇಲ್ಮೈ ನೀರಿನ ತಾಪಮಾನ ಹೆಚ್ಚಳದಿಂದ ಉಂಟಾಗುವ ಎಲ್ ನಿನೋ ಪ್ರಕ್ರಿಯೆಯೂ ಮಳೆ ಕೊರತೆಗೆ ಕಾರಣವಾಗಿದ್ದು, ಈ ಬಾರಿ ಅದರ ತೀವ್ರತೆ ಹೆಚ್ಚಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ವಾಡಿಕೆಯಂತೆ ಸುಮಾರು ೮೫೨ ಮಿಲಿಮೀಟರ್ ಮಳೆಯಾಗಬೇಕಿತ್ತು, ಆದರೆ ೬೪೨ ಮಿಲಿಮೀಟರ್ ಮಳೆಯಷ್ಟೇ ದಾಖಲಾಗಿದೆ. ರಾಜ್ಯದ ಸರಾಸರಿ ಮಳೆ ಕೊರತೆ ಶೇಕಡ ೩೬ರಷ್ಟಿದ್ದು, ದಕ್ಷಿಣ ಒಳನಾಡಿನಲ್ಲಿ ಶೇಕಡ ೪೬, ಉತ್ತರ ಒಳನಾಡಿನಲ್ಲಿ ಶೇಕಡ ೪೪, ಮಲೆನಾಡಿನಲ್ಲಿ ಶೇಕಡ ೩೮ ಹಾಗೂ ಕರಾವಳಿ ಭಾಗದಲ್ಲಿ ಶೇಕಡ ೨೮ರಷ್ಟು ಮಳೆ ಕೊರತೆ ದಾಖಲಾಗಿದೆ ಎಂದು ವಿವರಿಸಿದರು. ಮೊದಲ ಹಂತದಲ್ಲಿ ೧೦೧ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ನಿರಂತರ ಪರಿಶೀಲನೆಯ ಬಳಿಕ ಮತ್ತೆ ೨೩ ತಾಲೂಕುಗಳನ್ನು ಸೇರ್ಪಡೆ ಮಾಡಲಾಗಿದೆ. ಇನ್ನೂ ೫೩ ತಾಲೂಕುಗಳನ್ನು ಬರ ಪಟ್ಟಿಗೆ ಸೇರಿಸಲಾಗುತ್ತಿದ್ದು, ಒಟ್ಟು ೧೭೭ ತಾಲೂಕುಗಳು ಬರಪೀಡಿತ ಪ್ರದೇಶಗಳಾಗಿ ಘೋಷಣೆಯಾಗಲಿವೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಹಗರಣಕ್ಕೆ ಸಂಬಂಧಿಸಿದ ತನಿಖೆಯ ಪ್ರಗತಿಯ ಕುರಿತ ವರದಿಯನ್ನು ಸಿಐಡಿ ರಾಜ್ಯ ಸರ್ಕಾರ ಹಾಗೂ ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿದೆ. ಕೆಪಿಎಸ್‌ಸಿ ಮೂಲಕ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಹಗರಣದ ಕುರಿತಾದ ಈ ವರದಿಯಲ್ಲಿ, ಹಣದ ವರ್ಗಾವಣೆಯ ವಿವರಗಳು, ಬಂಧಿತ ಬಿಜೆಪಿ ಮುಖಂಡ ಬಸವರಾಜ ಕನ್ನಾಳೆ ಸೇರಿದಂತೆ ಮಧ್ಯವರ್ತಿಗಳ ಶಾಮೀಲು ಹಾಗೂ ನೇಮಕಾತಿ ಪ್ರಕ್ರಿಯೆಯನ್ನು ತಿರುಚುವಲ್ಲಿ ಅಧಿಕಾರಿಗಳ ಪಾತ್ರದ ಬಗ್ಗೆ ಮಾಹಿತಿ ನೀಡಲಾಗಿದೆ.

ತನಿಖೆಯ ವೇಳೆ ಸುಮಾರು ೨೨ ಲಕ್ಷ ರೂಪಾಯಿ ಮೌಲ್ಯದ ಚಿನ್ನ ಮತ್ತು ವಜ್ರದ ಆಭರಣಗಳಲ್ಲದೆ, ೧ ಕೋಟಿ ೫೦ ಲಕ್ಷಕ್ಕೂ ಹೆಚ್ಚಿನ ಹಣವನ್ನು ಪತ್ತೆಹಚ್ಚಲಾಗಿದೆ. ಕನಿಷ್ಠ ಮೂವರು ಅಭ್ಯರ್ಥಿಗಳು ಕನ್ನಾಳೆಗೆ ಒಟ್ಟು ೬೦ ಲಕ್ಷ ರೂಪಾಯಿ ನಗದು ನೀಡಿದ್ದಾರೆ ಎಂದು ತನಿಖೆಯಲ್ಲಿ ಉಲ್ಲೇಖಿಸಲಾಗಿದೆ.  ಕನ್ನಾಳೆ ಮತ್ತು ಅವರ ಸಹಚರರಿಗೆ ಸಂಬಂಧಿಸಿದ ವಿವಿಧ ಬ್ಯಾಂಕ್ ಖಾತೆಗಳಲ್ಲಿ ಗಣನೀಯ ಪ್ರಮಾಣದ ಹಣ ಇರುವುದನ್ನು ಸಿಐಡಿ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ.

<><><><>

ಹಿರಿಯ ನಟ ಅನಂತನಾಗ್ ಅವರಿಗೆ ೨೦೨೩ನೇ ಸಾಲಿನ ದಾದಾ ಸಾಹೇಬ್ ಪಾಲ್ಕೆ ಪ್ರಶಸ್ತಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಪ್ರದಾನ ಮಾಡಲಿದ್ದಾರೆ. ಗುಜರಾತ್‌ನ ಕೆವಾಡಿಯಾದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಕನ್ನಡದ ಮಿಥ್ಯ ಚಿತ್ರ ಅತ್ಯುತ್ತಮ ಚಲನಚಿತ್ರ ಪ್ರಶಸ್ತಿಯನ್ನು ಪಡೆಯಲಿದೆ. ಶಿವಧ್ವಜ್ ಶೆಟ್ಟಿ ನಿರ್ದೇಶನದ ಇಂಬು ಅತ್ಯುತ್ತಮ ತುಳು ಚಿತ್ರ ಪ್ರಶಸ್ತಿ ಹಾಗೂ ಈ ಚಿತ್ರದ ನಟನೆಗಾಗಿ ರೂಪಶ್ರೀ ವರ್ಕಾಡಿ ಅವರಿಗೆ ಅತ್ಯುತ್ತಮ ಪೋಷಕ ನಟಿ ಪ್ರಶಸ್ತಿ ಸಿಕ್ಕಿದೆ. ಅತ್ಯುತ್ತಮ ಬಾಲನಟ ಪ್ರಶಸ್ತಿಗೆ ಮಿಥ್ಯ ಸಿನಿಮಾಗಾಗಿ ಅತೀಶ್ ಎಸ್. ಶೆಟ್ಟಿ ಭಾಜನರಾಗಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ಕುರಿತು ಒಂದು ನೋಟ ಇಲ್ಲಿದೆ. ೨೦೨೦ರ ಜುಲೈ ೨೯ರಂದು ಕೇಂದ್ರ ಸರ್ಕಾರ ಜಾರಿಗೊಳಿಸಿದ ಈ ನೂತನ ನೀತಿಯು, ಹಳೆಯ ಶಾಲಾ ಚೌಕಟ್ಟಿನ ಬದಲಿಗೆ '೫+೩+೩+೪' ಎಂಬ ನೂತನ ಶೈಕ್ಷಣಿಕ ವಿನ್ಯಾಸವನ್ನು ಜಾರಿಗೆ ತಂದಿದೆ. ಪ್ರಮುಖವಾಗಿ, ಕನಿಷ್ಠ ೫ನೇ ತರಗತಿಯವರೆಗೆ ಮಾತೃಭಾಷೆ ಅಥವಾ ಗೃಹಭಾಷೆಯನ್ನೇ ಬೋಧನಾ ಮಾಧ್ಯಮವನ್ನಾಗಿ ಮಾಡುವುದಕ್ಕೆ ಈ ನೀತಿಯಲ್ಲಿ ಹೆಚ್ಚಿನ ಒತ್ತು ನೀಡಲಾಗಿದೆ. ಈ ಯೋಜನೆಯು ದೇಶಾದ್ಯಂತ ೮.೯ ಲಕ್ಷಕ್ಕೂ ಹೆಚ್ಚು ಶಾಲೆಗಳ ಸುಮಾರು ೪.೨ ಕೋಟಿಗೂ ಅಧಿಕ ಮಕ್ಕಳಿಗೆ ತಲುಪುವ ಮೂಲಕ ಯಶಸ್ವಿಯಾಗಿದೆ.

<><><><>

ರಾಜ್ಯದಲ್ಲಿ ವೇತನ ಪರಿಷ್ಕರಣೆ ಮತ್ತು ದೈನಂದಿನ ಕರ್ತವ್ಯದ ವೇಳಾಪಟ್ಟಿಯಲ್ಲಿ ಬದಲಾವಣೆ ಕೋರಿ ೧೦೮ ಅಂಬ್ಯುಲೆನ್ಸ್ ಸಿಬ್ಬಂದಿ ಸಾಮೂಹಿಕ ರಾಜೀನಾಮೆ ನೀಡುವ ಎಚ್ಚರಿಕೆ ನೀಡಿದ್ದಾರೆ. ಈ ಕುರಿತಂತೆ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ತುರ್ತು ಸಮಯದಲ್ಲಿ ಬಡವರಿಗೆ ಸಿಗಬೇಕಾದ ಮೂಲಭೂತ ಜೀವರಕ್ಷಕ ಸೇವೆಯನ್ನು ಸ್ಥಗಿತಗೊಳಿಸಿದ್ದು, ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

೧. ಸರ್ಕಾರಿ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆಯಲ್ಲಿ ಶಿಷ್ಟಾಚಾರವನ್ನು ಸಂಪೂರ್ಣವಾಗಿ ಉಲ್ಲಂಘಿಸಲಾಗುತ್ತಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಗೋವಿಂದ ಎಂ. ಕಾರಜೋಳ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅವರು ಮುಖ್ಯಮಂತ್ರಿಗಳ ಕಾರ್ಯಕ್ರಮವನ್ನು ಬಹಿಷ್ಕರಿಸುವುದಾಗಿ ಘೋಷಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>